## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಅಚ್ಯುತರಾವ್, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸುವ ಬಗ್ಗೆ -ಅದೇಶ.

*ಓದಲಾಗಿದೆ:*

*1* ಮಾನ್ಯ ಉಪ ಲೋಕಾಯುಕ್ತ-1,ರವರ ಲೋಕಾಯುಕ್ತ ಕಾಯ್ದೆ ಕಲಂ12(3)ರನ್ವಯ ವರದಿ ಸಂಖ್ಯೆ: Compt/uplok-GLB-1934/2016/ARE-5, Dated:23.9.2017.

*2* ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 98 ಇಎನ್‌ಕ್ಯೂ 17, ದಿ:24.10.2017.

*3* ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ:ಉಪಲೋಕ್-1/ಡಿಇ/1116/2017/ಎ.ಆರ್.ಇ -12, ದಿನಾಂಕ:17.10.2019 ಅದರೊಂದಿಗೆ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಇತರೆ ದಾಖಲೆಗಳು

*ಪ್ರಸ್ತಾವನೆ:-*

ಶ್ರೀ ಹನುಮಂತಪ್ಪ ತಂದೆ ಮಹಾದೇವಪ್ಪ ದೊಡ್ಡಮನಿ, ಇವರು ಸಲ್ಲಿಸಿದ್ದ ದೂರನ್ನು ಆಧರಿಸಿ, ಮಾನ್ಯ ಉಪಲೋಕಾಯುಕ್ತರು ತನಿಖೆ ಕೈಗೊಂಡು ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:18.3.2015 ರಲ್ಲಿ ಸಲ್ಲಿಸಿದ್ದ ಲೋಕಾಯುಕ್ತ ಕಾಯ್ದೆ ಕಲಂ 12(3) ರ ವರದಿಯನ್ನು ಪರಿಶೀಲಿಸಿ, ಅಚ್ಯುತರಾವ್, ಕಿರಿಯ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ, ಕೊಪ್ಪಳ ಇವರು ಕೊಪ್ಪಳ ತಾಲ್ಲೂಕಿನ ಭಾಗ್ಯನಗರ, ಹಟ್ಟಿ, ಕದಂಬನರ ಮತ್ತು ಟಕನಕಲ್ ಗ್ರಾಮಗಳಲ್ಲಿ ಕೈಗೊಳ್ಳಲಾಗಿದ್ದ ರಸ್ತೆ ಬದಿಯ ಡ್ರೈನ್ ಕಾಮಗಾರಿ, ಸಿಸಿ ರಸ್ತೆ ನಿರ್ಮಾಣ ಕಾಮಗಾರಿ, ಸಮುದಾಯ ಭವನ ನಿರ್ಮಾಣ ಕಾಮಗಾರಿಯನ್ನು ಕಳಪೆಯಾಗಿ ಅನುಷ್ಠಾನ ಮಾಡಿರುತ್ತಾರೆ ಎಂಬ ಆರೋಪಗಳು ಕಂಡು ಬಂದ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ವಿವರವಾದ ಇಲಾಖಾ ವಿಚಾರಣೆ ನಡೆಸಲು ಮೇಲೆ ಓದಲಾ ಕ್ರಮಾಂಕ (2) ರ ದಿನಾಂಕ:24.10.2017ರ ಆದೇಶದಲ್ಲಿ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ನಿಂಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಮೇಲೆ ಓದಲಾದ ಕ್ರಮಾಂಕ(3)ರ ಪತ್ರದೊಂದಿಗೆ ಅಚ್ಯುತರಾವ್, ಹಿಂದಿನ ಕಿರಿಯ ಇಂಜಿನಿಯರ್, ಇವರ ವಿರುದ್ಧ ಇಲಾಖಾ ವಿಚಾರಣೆಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣಾ ವರದಿ, ವಿಚಾರಣಾ ವರದಿಯ ಕುರಿತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ಕಳುಹಿಸಿರುತ್ತಾರೆ. ಪರಿಶೀಲಿಸಲಾಗಿ, ಮಾನ್ಯ ಉಪಲೋಕಾಯುಕ್ತರು ಸರ್ಕಾರದ ದಿನಾಂಕ: 24.10.2017ರ ಆದೇಶವನ್ನು ಅನುಸರಿಸಿ ಈ ಪ್ರಕರಣದಲ್ಲಿ ಇಲಾಖಾ ವಿಚಾರಣೆ ನಡೆಸಲು ಅಪರ ನಿಬಂಧಕರು ವಿಚಾರಣಾಧಿಕಾರಿ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಿದ್ದು, ನಂತರ ಸದರಿ ಆದೇಶವನ್ನು ಮಾರ್ಪಡಿಸಿ ಅಪರ ನಿಬಂಧಕರು ವಿಚಾರಣೆಗಳು-12, ಕರ್ನಾಟಕ ಲೋಕಾಯುಕ್ತ ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ವಿಚಾರಣಾಧಿಕಾರಿಗಳು ಈ ಸಂಬಂಧ ಆಪಾದಿತರಿಗೆ ದಿನಾಂಕ:11.12.2017 ರಂದು ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಿರುತ್ತಾರೆ. ಆಪಾದಿತರಾದ ಅಚ್ಯುತರಾವ್ ಇವರು ವಿಚಾರಣೆ ಪ್ರಗತಿಯಲ್ಲಿದ್ದ ಸಂದರ್ಭದಲ್ಲಿ ದಿನಾಂಕ:10.11.2018 ರಂದು ಮರಣ ಹೊಂದಿದ್ದು, ಈ ಕಾರಣದಿಂದ

ವಿಚಾರಣಾಧಿಕಾರಿಯವರು ವಿಚಾರಣೆಯನ್ನು ಸ್ಥಗಿತಗೊಳಿಸಿ ಮಾನ್ಯ ಉಪಲೋಕಾಯುಕ್ತರಿಗೆ ವರದಿ ಸಲ್ಲಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ಆಪಾದಿತರು ಇಲಾಖಾ ವಿಚಾರಣೆ ಬಾಕಿ ಇರುವ ಕಾಲಕ್ಕೆ ಮರಣ ಹೊಂದಿರುವುದನ್ನು ಪರಿಗಣಿಸಿ, ವಿಚಾರಣಾಧಿಕಾರಿಯವರ ವರದಿಯನ್ನು ಒಪ್ಪಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಅಚ್ಯುತರಾವ್ ಕಿರಿಯ ಇಂಜಿನಿಯರ್ ಇವರು ದಿನಾಂಕ:10.11.2018 ರಂದು ಮರಣ ಹೊಂದಿರುವುದನ್ನು ಪರಿಗಣಿಸಿ, ವಿಚಾರಣಾಧಿಕಾರಿಯವರು ಅವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಸ್ಥಗಿತಗೊಳಿಸಿದ್ದು, ಮಾನ್ಯ ಉಪಲೋಕಾಯುಕ್ತರು ತಮ್ಮ ಶಿಫಾರಸ್ಸಿನಲ್ಲಿ ಅಚ್ಯುತರಾವ್ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಸ್ಥಗಿತಗೊಳಿಸಿರುವ ಮಾಹಿತಿಯನ್ನು ಸ್ಪಷ್ಟಪಡಿಸಿರುತ್ತಾರೆ. ಆದ್ದರಿಂದ, ಅಚ್ಯುತರಾವ್ ಹಿಂದಿನ ಕಿರಿಯ ಇಂಜಿನಿಯರ್ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ರದ್ದುಪಡಿಸಿರುವುದನ್ನು ಅಂಗೀಕರಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಗ್ರಾಅಪ 81 ಇಎನ್‌ಕ್ಯೂ 19, ಬೆಂಗಳೂರು, ದಿನಾಂಕ:19.12.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ದಿ:ಅಚ್ಯುತರಾವ್, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರು ದಿ:10.11.2018ರಂದು ಮರಣ ಹೊಂದಿರುವುದನ್ನು ಪರಿಗಣಿಸಿ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮೇಲೆ ಓದಲಾದ ಸಂಖ್ಯೆ: ಗ್ರಾಅಪ 98 ಇಎನ್‌ಕ್ಯೂ 2017, ದಿನಾಂಕ:24.10.2017 ರ ಆದೇಶದಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದ್ದನ್ನು ಸ್ಥಗಿತಗೊಳಿಸಿ/ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/12/2019

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

19/12

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
7. ಸಂಬಂಧಿಸಿದ ನೌಕರರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಮುಖಾಂತರ)
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್) /ಉಪಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
10. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ಹೆಚ್ಚುವರಿ ಪ್ರತಿ.